**ಅಸಲು ದಾವಾ ಸಂಖ್ಯೆ:110/2022 ಪಿ.ಡಬ್ಲ್ಯೂ: 1**

**ಸಾಕ್ಷಿಯು ದಿನಾಂಕ03.04.2025 ರಂದು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣವಚನ ನೀಡಲಾಯಿತು.**

**ಮುಖ್ಯ ವಿಚಾರಣೆ: ಶ್ರೀPCM ನ್ಯಾಯವಾದಿಗಳಿಂದ:**

ನಾನು ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿವೆ, ಅದರಲ್ಲಿರುವ ಅಂಶಗಳನ್ನು ಅರ್ಥೈಸಿಕೊಂಡ ನಂತರ ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ದಾವಾ ಆಸ್ತಿಗೆ ಸಂಬಂದಿಸಿದ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.1 ಎಂದು, ಗುರುತಿಸಲಾಯಿತು. ದಿ:22.09.2021 ರ ನೊಂದಾಯಿತ ಕ್ರಯ ಕರಾರು ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.2 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ.2 ರಲ್ಲಿರುವ ತನ್ನ, ಪ್ರತಿವಾದಿ ಮತ್ತು ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.2 ಎ ಯಿಂದ ನಿಪಿ.2 ಡಿಎಂದು ಗುರುತಿಸಲಾಯಿತು. ದಿ:17.02.2022 ರ ವಕೀಲರ ಕಛೇರಿ ನೋಟಿಸ್ ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.3 ಎಂದು, ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

**ಸಾ . ಹೇ . ಬಿ. ಮಾಡಿಸಲಾಯಿತು.**

**ಓ.ಹೇ.ಕೇ.ಸ.ಇದೆ**

ಅಪರ **ಸಿವಿಲ್ ನ್ಯಾಯಾಧೀಶರು**
**ನಾಗಮಂಗಲ**